ಅ) ಬಿಜಾಪುರ ಜಿಲ್ಲಾ ಕೇಂದ್ರ ಗ್ರಂಥಾಲಯಕ್ಕಾಗಿ ಹೊಸ ಕಟ್ಟಡ ಕಟ್ಟಲು ಪ್ರಸ್ತಾವನೆ ಸರ್ಕಾರದವರ ಮುಂದಿದೆಯೇ?

ಆ) ಈ ಪ್ರಸ್ತಾವನೆಗೆ ಮಂಜೂರಾತಿ ನೀಡಲು ವಿಳಂಬಕ್ಕೆ ಕಾರಣಗಳೇನು?

ಇ) ಇದರ ನಿರ್ಮಾಣ ಕಾರ್ಯಕ್ಕೆ ಸರ್ಕಾರದವರು ಕೈಗೊಳ್ಳುವ ಕ್ರಮಗಳು ಯಾವುವು?

ಶ್ರೀ ಆರ್.ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು):

ಅ) ನಗರ ಕೇಂದ್ರ ಗ್ರಂಥಾಲಯ ಕಟ್ಟಡ ಮತ್ತು ವಾಣಿಜ್ಯ ಸಂಕೀರ್ಣವನ್ನು ಬಿಜಾಪುರ ನಗರ ಸಭೆಯವರಿಂದ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ಕಟ್ಟುವ ಪ್ರಸ್ತಾವನೆ ಇದೆ.

ಆ ಮತ್ತು ಇ) ಪರಿಶೀಲನೆಯಲ್ಲಿದೆ.

ವಿಷಯ: ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು.

999 (1641)

ಶ್ರೀ ಕೆ.ಪಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಗ್ರೂಪ್‌ಗಳಿಗೆ ಸೇರಿದ ಹುದ್ದೆಗಳೆಷ್ಟು? (ಗ್ರೂಪ್‌ವಾರು ವಿವರ ನೀಡುವುದು)

ಆ) ಈಗ ಹಾಲಿ ಕೆಲಸ ನಿರ್ವಹಿಸುತ್ತಿರುವ ವಿವಿಧ ಗ್ರೂಪ್‌ಗಳ ಹುದ್ದೆಗಳ ಸಂಖ್ಯೆ ಎಷ್ಟು?

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 9908 (ಗ್ರೂಪ್‌ವಾರು ವಿವರ ಲಗತ್ತಿಸಿದೆ).

ಆ) 48816.

ಇ) 1. ವರ್ಗಾವಣೆ ಮಾಡುವುದರ ಮೂಲಕ

2. ಗುತ್ತಿಗೆ ಆಧಾರದ ಮೇಲೆ ನೇಮಿಸುವ ಮೂಲಕ

3. ನೇರ ನೇಮಕಾತಿ ಮೂಲಕ ನೇಮಿಸಲು ಸಂದರ್ಶನ ಪ್ರಕ್ರಿಯೆಯಲ್ಲಿದೆ.

4. ಬಡ್ತಿ ನೀಡುವ ಮೂಲಕ

5. ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

STAFF POSITION OF GROUP 'A', 'B', 'C' AND 'D' OF THE DIRECTORATE OF HEALTH & FAMILY WELFARE SERVICES AS ON 31.3.1997

ABSTRACT

CATEGORY	SANCTIONED	WORKING	VACANT
GROUP 'A'	5027	4197	830
GROUP 'B'	493	353	140
GROUP 'C'	37551	29539	8012
GROUP 'D'	15653	14727	926
TOTAL	58724	48816	9908

ವಿಷಯ: ರಾಜ್ಯದಲ್ಲಿನ ನಗರ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ.

1000 (1640)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ರಾಜ್ಯದ ನಗರ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ?